# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

**************************************************************************************

ಸಂಖ್ಯೆ: w-137/Committee/Proceding -32/2021-22 dt. 05-03-2022

## ಸಭೆಯ ನಡವಳಿಗಳು

05-03-2022 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಂಖ್ಯೆ: 137 ರಾಯಪುರಂ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಮಗಾರಿ) ವಸಂತನಗರ ಉಪ ವಿಭಾಗ ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 137 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಹಾಯಕ ಕಾರ್ಯನಿರ್ವಹಕ ಅಧಿಕಾರಿಗಳ ಪ್ರತಿನಿಧಿ ಹಾಗೂ ಕೆಲಸ ಪರಿವೀಕ್ಷಕರು ದೂರು ಪುಸ್ತಕವನ್ನು ಸಭೆಯಲ್ಲಿ ನೀಡಿ ಸಾರ್ವಜನಿಕರಿಂದ ಬಂದ ದೂರುಗಳ ಪಟ್ಟಿ ಮತ್ತು ದೂರುಗಳನ್ನು ಪರಿಹರಿಸಿದ ದಿನಾಂಕ ಮತ್ತು ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.

ಅಧ್ಯಕ್ಷರು ಡಬ್ಲ್ಯೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲೂಎಸ್ಎಸ್‌ಬಿ ಅಧಿಕಾರಿಗಳು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ಹಾಗೂ ವಾರ್ಡ್ 137 ರಲ್ಲಿ ಹೆಚ್ಚಿನ ಪ್ರಮಾಣದ ಪೌರ ಕಾರ್ಮಿಕರು ವಾಸಿಸುತ್ತಿದ್ದು ಸದರಿ ಪೌರ ಕಾರ್ಮಿಕರು ಪ್ರತಿ ದಿನ ಕೆಲಸ ಕಾರ್ಯಕ್ಕೆ ಹಾಜರಾಗಬೇಕಾದ ಕಾರಣ ಎರಡನೇ ಪಾಲಿಯಲ್ಲಿ ಕಸ ಸಂಗ್ರಹಣೆ ಮಾಡುವಂತೆ ಕೋರಿರುವ ಹಿನ್ನಲೆಯಲ್ಲಿ ಕೈಗೊಂಡ ಕ್ರಮದ ಬಗ್ಗೆ ಹಾಗೂಮನೆಗಳಿಗೆ ಆಟೋಗಳು ಸಮಯಕ್ಕೆ ಸರಿಯಾಗಿ ಹೊಗುವಂತೆ ನೋಡಿಕೊಳ್ಳಲು ಸಭೆಯಲ್ಲಿ ತಿಳಿಸಿದರು.

.. ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -137ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಪೌರ ಕಾರ್ಮಿಕರು ಹೆಚ್ಚು ಇರುವ ಪ್ರದೇಶದಲ್ಲಿ ಹೆಚ್ಚುವರಿಯಾಗಿ ಸಂಜೆಯ ಸಮಯದಲ್ಲಿ ಕಸ ಸಂಗ್ರಹಣೆ ಮಾಡಲು ಆಟೋ ನಿಯೋಜಿಸಿರುವುದಾಗಿ ಹಾಗೂ ಆಟೋಗಳನ್ನು ಪರಿಶೀಲಿಸಿ ಸರಿಯಾದ ಸಮಯಕ್ಕೆ ಕಸ ಸಂಗ್ರಹಣೆ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್-137ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೇಸ್ಕಂಗೆ ಸಂಬಂಧಿಸಿದ ದೂರುಗಳು ಬಂದಿದ್ದು ರಾತ್ರಿಯ ಸಮಯದಲ್ಲಿ ಸ್ವಿಚ್‌ಗಳು ಹಾಗೂ ಲೈಟ್‌ಗಳು ಹಾಳಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿದಿಯು ಸದರಿ ವಿಷಯದ ಬಗ್ಗೆ ತುರ್ತು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು.

ಮಾನ್ಯ ಅಧ್ಯಕ್ಷರು ಕಂದಾಯ ಅಧಿಕಾರಿಗಳಿಗೆ ಮತದಾನದ ಗುರ್ತಿನ ಚೀಟಿ ವಿತರಿಸುವ ಮತ್ತು ಹೊಸ ಮತದಾರರ ಗುರ್ತಿನ ಚೀಟಿ ನೋಂದಣಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಬಿ.ಬಿ.ಎಂ.ಪಿ ಚುನಾವಣೆಯು ಕೆಲವು ತಿಂಗಳುಗಳಲ್ಲಿ ನಡೆಯುವ ಸಾಧ್ಯತೆ ಇರುವುದರಿಂದ ಹೊಸದಾಗಿ ಮತದಾರರ ಗುರ್ತಿನ ಚೀಟಿ ನೊಂದಣಿ ಮತ್ತು ತಿದ್ದುಪಡಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಸಭೆಯಲ್ಲಿ ವಿವರಣೆ ಮತ್ತು ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಆರೋಗ್ಯ ಪರಿವೀಕ್ಷಕರು ವಾಡ್-137 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-137 ರವರುಗಳಿಗೆ ಕೋವಿಡ್-19 ಪೂರ್ಣ ಪ್ರಮಾಣದಲ್ಲಿ ತಗ್ಗಿದ್ದು ವಾರ್ಡ್ ನಲ್ಲಿ ಲಸಿಕೆ ಅಭಿಯಾನ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಸಾರ್ವಜನಕರು ಸ್ವಂಧಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

. ಮಾನ್ಯ ಅಧ್ಯಕ್ಷರು ವಾರ್ಡ್ 137ರ ವ್ಯಾಪ್ತಿಯಲ್ಲಿ ಮಾಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-137ರ ಮಾಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 8000 ಎಸ್‌ಡಬ್ಲೂಎಂ. ದಂಡ ರೂ. 3000 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಚೇರಿಗೆ ಸಲ್ಲಿಸಿರುತ್ತಾರೆ.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

## ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಮೊಹಮದ್ ಜಾವೀದ್, ಸಹಾಯಕ ಕಾರ್ಯಪಾಲಕ ಅಭಿಯಂತರರು(ವಸಂತನಗರ ಉಪ ವಿಭಾಗ) ಬಿ.ಬಿ.ಎಂ.ಪಿ. ದೂ. ಸಂಖ್ಯೆ: 9845720286 | ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ | |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 137 ಬಿ.ಬಿ.ಎಂ.ಪಿ. ದೂ. ಸಂ 8618436036 | ಸದಸ್ಯ ಕಾರ್ಯದರ್ಶಿ | |
| 3 | ಗೀತಾ ಹೆಚ್. ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -137 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ರವರ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) ವಾರ್ಡ್-137, ದೂ. 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಾಜಪೇಟೆ ವಿಭಾಗ ರವರ ಪ್ರತಿನಿಧಿ ಬಸವಲಿಂಗಯ್ಯ ದೂ. 9686418488 | ಸದಸ್ಯರು | |
| 6 | ಶ್ರೀ ಸಿ. ಆರ್ ರವಿ ಪ್ರಸಾದ್ ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845802912 | ಸದಸ್ಯರು | |
| 7 | ಶ್ರೀ ರಿಜ್ವಾನ್, ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845262860 | ಸದಸ್ಯರು | Rizwan |
| 8 | ಶ್ರೀ ರಾಜು, ದೂ.. 7676512877 ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. | ಸದಸ್ಯರು | — |
| 9 | ಶ್ರೀಮತಿ ಆಶಾ. ದೂ. 9731317223 ಕಂದಾಯ ಪರಿವೀಕ್ಷಕರು | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ | ಸದಸ್ಯರು | |
| 11 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಶ್ರೀ ಕುಮಾರ್ ಸ್ವಾಮಿ, ದೂ. 9060341644 | ಸದಸ್ಯರು | |
| 12 | ಸಹಾಯಕ ಕಾರ್ಯ ಪಾಲಕ ಅಭಿಯಂತರರು (ಬೆಸ್ಕಂ) ರವರ ಪ್ರತಿನಿಧಿ. ದೂ. 9449840364 | ಸದಸ್ಯರು | |

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 137
ವಾರ್ಡ್ ಹಂತದ ಸಮಿತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 137